ಟೈಮ್ಸ್ ಆಫ್ ಕರ್ನಾಟಕ

**Tuesday 03rd October 2023, Page No.03**

## RVCE: Let India emerge as a strong nation with the implementation of the new National Education Policy

# ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಿಂದ ಸಶಕ್ತ ರಾಷ್ಟ್ರವಾಗಿ ಭಾರತ ಹೊರಹೊಮ್ಮಲಿ

ಕೆಂಗೇರಿ : ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಿಂದ ಶೈಕ್ಷಣಿಕ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ಜೊತೆ ಮುಂದಿನ ದಿನಗಳಲ್ಲಿ ತಂತ್ರಜ್ಞಾನ ಕ್ಷೇತ್ರವು ಗಣನೀಯ ಸಾಧನೆ, ಅಭಿವೃದ್ಧಿಶೀಲ ಮತ್ತು ಸಶಕ್ತ ರಾಷ್ಟ್ರವಾಗಿ ಭಾರತ ಹೊರಹೊಮ್ಮಲಿದೆ ಎಂದು ನವದೆಹಲಿಯ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ ಅಧ್ಯಕ್ಷ ಪ್ರೊ.ಟಿ.ಜಿ.ಸೀತಾರಾಮ್ ಹೇಳಿದರು.

ಬೆಂಗಳೂರು–ಮೈಸೂರು ಹೆದ್ದಾರಿ ಸಮೀಪದ ರಾ.ವಿ ತಾಂತ್ರಿಕ ಮಹಾವಿದ್ಯಾಲಯದ ವತಿಯಿಂದ ಪೂರ್ಣಿಮಾ ಪ್ಯಾಲೇಸಿನಲ್ಲಿ ಪ್ರಥಮ ವರ್ಷದ ಬಿಇ 2023–24 ನೇ ಸಾಲಿನ ತರಗತಿಗಳ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ವಿಧ್ಯಾರ್ಥಿಗಳಿಗೆ ಪ್ರಾದೇಶಿಕ ಭಾಷೆಯಲ್ಲಿ ತಾಂತ್ರಿಕ ಪಠ್ಯಕ್ರಮ ದೊರಕುವುದರಿಂದ ವಿಧ್ಯಾರ್ಥಿಗಳು ಸರಳವಾಗಿ ಅರ್ಥೈಸಿಕೊಂಡು ಜ್ಞಾನ ವೃದ್ಧಿಗೆ ಸಹಕಾರಿಯಾಗಿದೆ ಎಂದರು. ತಂತ್ರಜ್ಞಾನ ಕ್ಷೇತ್ರದಲ್ಲಿ ವಿಶ್ವದ ಇತರ ರಾಷ್ಟ್ರಗಳೊಂದಿಗೆ ಪ್ರತಿಸ್ಪರ್ಧೆಯೊಡ್ಡಿ ಸವಾಲು



ಸಮರ್ಥವಾಗಿ ನಿಭಾಯಿಸಲು ಕೇಂದ್ರ ಸರ್ಕಾರ ಗುಣಮಟ್ಟದ ಶಿಕ್ಷಣದೊಂದಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಜೊತೆ ಎಲ್ಲಾ ರೀತಿಯ ಸಹಕಾರ ನೀಡುವ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ವಿಧ್ಯಾರ್ಥಿಗಳಿಗೆ ಉತ್ತೇಜನ ನೀಡುತ್ತಿದೆ ಎಂದರು. ಬಾಹ್ಯಾಕಾಶ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡುವ ಮೂಲಕ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ನೂತನ ಮೈಲಿಗಲ್ಲು ಸ್ಥಾಪಿಸಿದೆ ಎಂದು ಶ್ಲಾಘಿಸಿ, ವಿಧ್ಯಾರ್ಥಿಗಳು ಎಷ್ಟೇ ಸಾಧನೆ ಮಾಡಿದರೂ ವಿದ್ಯೆ ಕಲಿತ ಶಾಲೆ, ಗುರು ಹಿರಿಯರನ್ನು ಕಡೆಗಣಿಸದೆ ಮಾನವೀಯತೆ ಮೈಗೂಡಿಸಿಕೊಂಡು ಸಮಾಜದ ಅಭ್ಯುದಯಕ್ಕಾಗಿ ಶ್ರಮಿಸಬೇಕೆಂದು ಕಿವಿ ಮಾತು ಹೇಳಿದರು.

ರಾ.ವಿ ತಾಂತ್ರಿಕ ಮಹಾವಿದ್ಯಾಲಯ ಆಡಳಿತ ಮಂಡಳಿ ಅಧ್ಯಕ್ಷ ಡಾ.ಎಂ.ಪಿ.ಶ್ಯಾಮ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಾಲೇಜಿನ ಆಡಳಿತ ಮಂಡಳಿ ವಿಧ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರಕಿಸಿಕೊಡಲು ಆದ್ಯತೆ ನೀಡಿ ಕಾರ್ಯನಿರ್ವಹಿಸುತ್ತಿದ್ದು, ತಂತ್ರಜ್ಞಾನ ಕ್ಷೇತ್ರದ ಬೆಳವಣಿಗೆಗೆ ಪೂರಕವಾಗಿ ಸಂಶೋಧನೆ ಕೈಗೊಳ್ಳುವ ವಿಧ್ಯಾರ್ಥಿಗಳಿಗೆ ಎಲ್ಲಾ ರೀತಿ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ, ಕಾಲೇಜಿನಲ್ಲಿ ವ್ಯಾಸಂಗ ನಡೆಸಿ ಉನ್ನತ ಹುದ್ದೆ ಅಲಂಕರಿಸಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಗೌರವ ಕಾರ್ಯದರ್ಶಿ ಡಾ.ಎ.ವಿ.ಎಸ್.ಮೂರ್ತಿ, ಪ್ರಾಂಶುಪಾಲ ಡಾ.ಕೆ.ಎನ್.ಸುಬ್ರಮಣ್ಯ, ಉಪಪ್ರಾಂಶುಪಾಲೆ ಡಾ.ಗೀತಾ ಸುಬ್ರಮಣ್ಯ, ಶಿಕ್ಷಕ ವರ್ಗ, ವಿದ್ಯಾರ್ಥಿಗಳು, ಪೋಷಕರು, ಇತರರಿದ್ದರು.